ಜೆಎಸ್‌ಎಸ್ ಮಹಾವಿದ್ಯಾಪೀಠ

ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ವೃತ್ತ, ಮೈಸೂರು




# ಜೆಎಸ್‌ಎಸ್ ನರ್ಸಿಂಗ್ ಕಾಲೇಜು

ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ ಆವರಣ, ಚಾಮರಾಜನಗರ

## ಕಾಲೇಜಿನ ಉದ್ಘಾಟನೆ
## ಪ್ರಥಮ ವರ್ಷದ ವಿದ್ಯಾರ್ಥಿಗಳಿಂದ ಜ್ಯೋತಿ ಬೆಳಗಿಸುವುದು
## ಪ್ರತಿಜ್ಞಾವಿಧಿ ಸ್ವೀಕಾರ

**17 ಏಪ್ರಿಲ್ 2023 * ಸೋಮವಾರ * ಸಂಜೆ 4.00**

ದಿವ್ಯ ಸಾನ್ನಿಧ್ಯ

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರು**

ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಶ್ರೀ ಸುತ್ತೂರು ಕ್ಷೇತ್ರ

ಅಧ್ಯಕ್ಷತೆ

**ಡಾ. ಟಿ. ದಿಲೀಪ್ ಕುಮಾರ್**

ಅಧ್ಯಕ್ಷರು, ಭಾರತೀಯ ಶುಶ್ರೂಷ ಮಂಡಳಿ, ನವದೆಹಲಿ

ಉದ್ಘಾಟನೆ

**ಡಾ. ಎಂ.ಕೆ. ರಮೇಶ್**

ಕುಲಪತಿಗಳು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು

ಮುಖ್ಯ ಅತಿಥಿಗಳು

**ಡಾ. ಎಂ.ಆರ್. ಗಂಗಾಧರ್**

ಕುಲಪತಿಗಳು, ಚಾಮರಾಜನಗರ ವಿಶ್ವವಿದ್ಯಾನಿಲಯ

ಉಪಸ್ಥಿತರು

**ಡಾ. ಸಿ.ಜಿ. ಬೆಟಸೂರುಮಠ**

ಕಾರ್ಯನಿರ್ವಾಹಕ ಕಾರ್ಯದರ್ಶಿಗಳು

**ಶ್ರೀ ಆರ್. ಮಹೇಶ್**

ನಿರ್ದೇಶಕರು, ವೈದ್ಯಕೀಯ ಶಿಕ್ಷಣ ವಿಭಾಗ

**ಸರ್ವರಿಗೂ ಆದರದ ಸ್ವಾಗತ**

ಪ್ರಾಂಶುಪಾಲರು, ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು

ಶ್ರೀ ಸುತ್ತೂರು ಕ್ಷೇತ್ರದ ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠವು ಸಹಸ್ರಾರು ವರ್ಷಗಳಿಂದ ಧಾರ್ಮಿಕ, ಸಾಂಸ್ಕೃತಿಕ ಹಾಗೂ ಸಾಮಾಜಿಕ ಸೇವಾಕಾರ್ಯಗಳಲ್ಲಿ ನಿರತವಾಗಿದೆ. ಜೆಎಸ್‌ಎಸ್ ಮಹಾವಿದ್ಯಾಪೀಠವು ಶಿಕ್ಷಣ, ಆರೋಗ್ಯ, ಸಾಮಾಜಿಕ ಹಾಗೂ ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಸಲ್ಲಿಸುತ್ತಿರುವ ಸೇವೆ ಸರ್ವವಿದಿತ. ಮಹಾವಿದ್ಯಾಪೀಠದ ಆಶ್ರಯದಲ್ಲಿ 300ಕ್ಕೂ ಹೆಚ್ಚು ಸಂಸ್ಥೆಗಳು ಕರ್ನಾಟಕ, ತಮಿಳುನಾಡು, ಉತ್ತರಪ್ರದೇಶ, ದೆಹಲಿ ಹಾಗೂ ಹೊರದೇಶಗಳಾದ ಮಾರಿಷಸ್, ದುಬೈ ಹಾಗೂ ಅಮೆರಿಕಗಳಲ್ಲಿ ಸೇವೆ ಸಲ್ಲಿಸುತ್ತಿವೆ.

ಸಾಮಾಜಿಕ ಅಭಿವೃದ್ಧಿಯು ಉತ್ತಮ ಶಿಕ್ಷಣದ ಮೂಲಕ ಸಾಧ್ಯವೆಂದು ಮನಗಂಡಿದ್ದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು 1950ರಲ್ಲಿ ಚಾಮರಾಜನಗರದಲ್ಲಿ ವಿದ್ಯಾರ್ಥಿನಿಲಯವನ್ನು ಪ್ರಾರಂಭಿಸಿದರು. ಇದರ ಪರಿಣಾಮವಾಗಿ ಇಲ್ಲಿ ಪದವಿಪೂರ್ವ ಕಾಲೇಜು, ಮಹಿಳಾ ಪದವಿ ಮತ್ತು ಸ್ನಾತಕೋತ್ತರ ಕಾಲೇಜು, ಬಿ.ಎಡ್. ಕಾಲೇಜು, ನರ್ಸಿಂಗ್ ಶಾಲೆ, ಗ್ರಾಮೀಣ ಇನ್‌ಕ್ಯುಬೇಷನ್ ಮತ್ತು ಕೌಶಲ್ಯ ಅಭಿವೃದ್ಧಿ ಕೇಂದ್ರ (ಆರ್‌ಐಎಸ್‌ಡಿಸಿ), ಐಟಿಐ, ಬಾಲಕ ಮತ್ತು ಬಾಲಕಿಯರ ಪ್ರೌಢಶಾಲೆಗಳು, ಪಬ್ಲಿಕ್ ಶಾಲೆ ಮತ್ತು ಜೆಎಸ್‌ಎಸ್ ಆಸ್ಪತ್ರೆ ಮುಂತಾದ ಸೇವಾಸಂಸ್ಥೆಗಳು ನಡೆಯುತ್ತಿವೆ. ಚಾಮರಾಜನಗರ ಜಿಲ್ಲೆಯ ವಿವಿಧ ಕಡೆಗಳಲ್ಲಿ ಹಾಗೂ ಚಾಮರಾಜನಗರಕ್ಕೆ ಹೊಂದಿಕೊಂಡಿರುವ ತಮಿಳುನಾಡಿನ ತಾಳವಾಡಿಯಲ್ಲಿಯೂ ಸಂಸ್ಥೆಗಳಿವೆ.

ಮಹಾವಿದ್ಯಾಪೀಠವು ಸಂಸ್ಥೆಗಳ ಮೂಲಕ ಉತ್ತಮ ಶಿಕ್ಷಣ ನೀಡುವುದಲ್ಲದೆ, ಗ್ರಾಮೀಣ ಪ್ರದೇಶಗಳಲ್ಲಿನ ಜನಸಾಮಾನ್ಯರಿಗೆ ಉತ್ತಮ ಆಧುನಿಕ ಆರೋಗ್ಯ ಸೇವೆ ಸಲ್ಲಿಸಲು ಆರೋಗ್ಯ ಕ್ಷೇತ್ರದಲ್ಲಿಯೂ ಶ್ರಮ ವಹಿಸುತ್ತಿದೆ. ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ಆಶಯದಂತೆ 2017ರಲ್ಲಿ ಚಾಮರಾಜನಗರದಲ್ಲಿ 100 ಹಾಸಿಗೆಗಳ ಆಧುನಿಕ ಸೌಲಭ್ಯಗಳುಳ್ಳ ಆಸ್ಪತ್ರೆಯನ್ನು ಪ್ರಾರಂಭಿಸಲಾಗಿದ್ದು, ಉತ್ತಮ ರೀತಿಯಲ್ಲಿ ಸೇವೆ ಸಲ್ಲಿಸುತ್ತಿದೆ.

2004ರಲ್ಲಿ ನರ್ಸಿಂಗ್ ಶಾಲೆಯನ್ನು ಪ್ರಾರಂಭಿಸಲಾಯಿತು. ಪ್ರತಿ ವರ್ಷ 60ಕ್ಕೂ ಹೆಚ್ಚು ವಿದ್ಯಾರ್ಥಿಗಳು ತೇರ್ಗಡೆ ಹೊಂದಿ ಶುಶ್ರೂಷಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಈ ಭಾಗದ ಹಿಂದುಳಿದ ಮತ್ತು ಬಡ ವಿದ್ಯಾರ್ಥಿಗಳಿಗೆ ನರ್ಸಿಂಗ್‌ನಲ್ಲಿ ಉನ್ನತ ಶಿಕ್ಷಣಕ್ಕೆ ಅವಕಾಶ ಒದಗಿಸುವ ದೃಷ್ಟಿಯಿಂದ ಹೊಸದಾಗಿ 'ಜೆಎಸ್‌ಎಸ್ ಕಾಲೇಜ್ ಆಫ್ ನರ್ಸಿಂಗ್'ಅನ್ನು 2022–23ನೇ ಸಾಲಿನಿಂದ 40 ವಿದ್ಯಾರ್ಥಿಗಳ ಪ್ರವೇಶಾತಿಯೊಂದಿಗೆ ಪ್ರಾರಂಭಿಸಲಾಗಿದೆ. ಈ ಸಂಸ್ಥೆಯು ಬೆಂಗಳೂರಿನ ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾನಿಲಯಕ್ಕೆ ಸಂಯೋಜನೆಗೊಂಡಿದ್ದು, ನವದೆಹಲಿಯ ಭಾರತೀಯ ಶುಶ್ರೂಷ ಮಂಡಳಿಯಿಂದ ಮಾನ್ಯತೆ ಪಡೆದಿದೆ. ನುರಿತ ಅನುಭವಿ ಅಧ್ಯಾಪಕರುಗಳಿದ್ದಾರೆ. ಉತ್ತಮ ಪ್ರಯೋಗಾಲಯ, ಗ್ರಂಥಾಲಯ ಸೌಲಭ್ಯಗಳಿವೆ. ವಿದ್ಯಾರ್ಥಿನಿಯರಿಗೆ ವಸತಿ ಸೌಕರ್ಯವಿದೆ. ಸಮುಚ್ಚಯದಲ್ಲಿಯೇ ನರ್ಸಿಂಗ್ ಶಾಲೆ ಹಾಗೂ ಆಸ್ಪತ್ರೆಗಳಿರುವುದರಿಂದ ಉತ್ತಮ ಶಿಕ್ಷಣ ದೊರೆಯುವುದರೊಂದಿಗೆ ವೃತ್ತಿ ಪ್ರಾರಂಭಕ್ಕೂ ಹೆಚ್ಚಿನ ಅನುಕೂಲವಾಗಲಿದೆ.